ವಿಶ್ವ ಜಾನಪದ ದಿನಾಚರಣೆ ಕಾರ್ಯಕ್ರಮ

ಸಂಯೋಜನೆ: ಕರ್ನಾಟಕ ಜಾನಪದ ಪರಿಷತ್ತು, ತಾಲೂಕು ಘಟಕ ತೀರ್ಥಹಳ್ಳಿ ಹಾಗೂ ಕಾಲೇಜಿನ ಕನ್ನಡ ವಿಭಾಗ

ದಿನಾಂಕ: 18.08.2026 **ಸ್ಥಳ: ಕಾಲೇಜು ಸಭಾಂಗಣ, ತುಂಗಾ ಮಹಾವಿದ್ಯಾಲಯ**

ಕಾರ್ಯಕ್ರಮದ ವರದಿ

ದಿನಾಂಕ 18.08.2026 ರಂದು **ಕರ್ನಾಟಕ ಜಾನಪದ ಪರಿಷತ್ತು, ತಾಲೂಕು ಘಟಕ ತೀರ್ಥಹಳ್ಳಿ ಹಾಗೂ ಕಾಲೇಜಿನ ಕನ್ನಡ ವಿಭಾಗ**ದ ಸಹಯೋಗದಲ್ಲಿ ವಿಶೇಷ "**ವಿಶ್ವ ಜಾನಪದ ದಿನಾಚರಣೆ ಕಾರ್ಯಕ್ರಮ**"ವನ್ನು ಯಶಸ್ವಿಯಾಗಿ ಹಮ್ಮಿಕೊಳ್ಳಲಾಗಿತ್ತು.

ಕನ್ನಡ ಉಪನ್ಯಾಸಕ ಶ್ರೀ ಪ್ರಸನ್ನ ಕೆ ಎಲ್ ಸೋಬಾನೆ ಪದವನ್ನು ಹಾಡುವುದರ ಮೂಲಕ ಕಾರ್ಯಕ್ರಮವನ್ನು ಆರಂಭಿಸಿದರು. ಮೂಲಕ ಅರ್ಥಪೂರ್ಣವಾಗಿ ಉದ್ಘಾಟಿಸಿದರು. ನಂತರ ಕನ್ನಡ ವಿಭಾಗದ ಮುಖ್ಯಸ್ಥ ಡಾ. ರಮೇಶ್ ಡಿ ಪ್ರಾಸ್ತಾವಿಕ ನುಡಿಗಳನ್ನಾಡಿ ಎಲ್ಲರನ್ನು ಸ್ವಾಗತಿಸಿದರು. ಮೊರದಲ್ಲಿ ಅಕ್ಕಿಯನ್ನು ಕೇರುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ತುಂಗಾ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಶ್ರೀ ಎಂ ಎನ್ ರಮೇಶ್ ಕೃತಕ ಬುದ್ಧಿಮತ್ತೆಯ ತಂತ್ರಜ್ಞಾನದ ಯುಗದಲ್ಲಿ ಜನಪದ ಕಲೆಗಳನ್ನು ಉಳಿಸುವುದೇ ದೊಡ್ಡ ಸವಾಲಾಗಿದೆ. ವಿದ್ಯಾರ್ಥಿಗಳಿಗೆ ಇಂತಹ ಅರಿವಿನ ಅಗತ್ಯವಿದೆ. ಇದಕ್ಕೆ ಆಳುವ ಸರ್ಕಾರಗಳು ಜನಪದ ಕಲೆ ಮತ್ತು ಕಲಾವಿದರನ್ನು ಇನ್ನಷ್ಟು ಪ್ರೋತ್ಸಾಹಿಸುವತ್ತ ಗಮನಹರಿಸಬೇಕು ಎಂದರು. ಇಂತಹ ಕಾರ್ಯಕ್ರಮಗಳಿಗೆ ನಮ್ಮ ಕಾಲೇಜು ಯಾವಾಗಲೂ ಪ್ರೋತ್ಸಾಹ ನೀಡಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಶೇಷ ಅತಿಥಿಗಳಾಗಿ ಆಗಮಿಸಿದ ಕರ್ನಾಟಕ ಜಾನಪದ ಪರಿಷತ್ತು, ಶಿವಮೊಗ್ಗದ ಜಿಲ್ಲಾಧ್ಯಕ್ಷರಾದ ಡಿ ಮಂಜುನಾಥ್ "ಜನಪದ ಎಂಬ ಪರಿಕಲ್ಪನೆ ಇಂದು ವಿಶ್ವದಾದ್ಯಂತ ಇದ್ದರು ಕನ್ನಡ ಜನಪದ ಪರಂಪರೆಗೆ ಜಗತ್ತಿನಲ್ಲೇ ಶ್ರೇಷ್ಠ ಸ್ಥಾನವಿದೆ. ಇದು ತನ್ನ ನೆಲಮೂಲ ಸಂಸ್ಕೃತಿಯ ಬೇರುಗಳನ್ನು ಕಳೆದುಕೊಳ್ಳದೇ ಇಂದಿಗೂ ತನ್ನ ಅಸ್ಮಿತೆಯನ್ನು ಉಳಿಸಿಕೊಂಡಿದೆ. ಇದಕ್ಕೆ ಕಾರಣ ನಮ್ಮ ಕನ್ನಡದ ಜನಪದ ಕಲಾವಿದರು. ಆದ್ದರಿಂದ ಜನಪದ ಕಲಾವಿದರು ನಮ್ಮ ಸಾಂಸ್ಕೃತಿಕ ರಾಯಭಾರಿಗಳು" ಎಂದು ಅಭಿಪ್ರಾಯ ಪಟ್ಟರು. ಕರ್ನಾಟಕದ ಶ್ರೇಷ್ಠ ಜಾನಪದ ತಜ್ಞ ಅಂಬಳಿಕೆ ಹಿರಿಯಣ್ಣನವರು ತುಂಗಾ ಮಹಾವಿದ್ಯಾಲಯದ ಹಿರಿಯ ವಿದ್ಯಾರ್ಥಿ. ಇಂತಹ ಸಾಕಷ್ಟು ಶ್ರೇಷ್ಠ ಜಾನಪದ ಕಲಾವಿದರನ್ನು ಸೃಷ್ಟಿಸಿದ ಹಿರಿಮೆ ತುಂಗಾ ಮಹಾವಿದ್ಯಾಲಯಕ್ಕಿದೆ. ಆದ್ದರಿಂದ ಇಲ್ಲಿ ಇವತ್ತು ವಿಶ್ವ ಜಾನಪದ ದಿನಾಚರಣೆಯನ್ನು ಆಚರಿಸುತ್ತಿರುವುದು ಅರ್ಥಪೂರ್ಣವಾಗಿದೆ ಎಂದರು. ಜನಪದ ಕಲೆಗಳನ್ನು ಉಳಿಸಿ ಬೆಳೆಸುವ ಮಹತ್ವದ ಜವಾಬ್ದಾರಿ ಇಂದಿನ ಯುವತಲೆಮಾರಿಗೆ ಬಹಳ ಮುಖ್ಯವಾದುದು. ವಿದ್ಯಾರ್ಥಿಗಳು ಈ ಬಗೆಯ ಜ್ಞಾನವನ್ನು ಗಳಿಸಿಕೊಳ್ಳುವುದು ಅಗತ್ಯವಾದುದು ಎಂದರು.

ಇದೇ ಸಂದರ್ಭದಲ್ಲಿ ತೀರ್ಥಹಳ್ಳಿ ತಾಲೂಕು ಗೊರಕೋಡಿನ ಪಾರಂಪರಿಕ ನಾಟಿ ವೈದ್ಯರಾದ ಶ್ರೀ ಶೇಷಪ್ಪ ನಾಯಕ ಅವರನ್ನು ಸನ್ಮಾನಿಸಲಾಯಿತು. ಸರ್ಕಾರಿ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಡಾ. ಬಿ.ಎಂ. ಜಯಶೀಲಾ ಅವರು ನಾಟಿ ವೈದ್ಯ ಪರಂಪರೆಯ ಕುರಿತು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ತಾಲೂಕು ಜಾನಪದ ಪರಿಷತ್ತಿನ ಅಧ್ಯಕ್ಷರಾದ ಶ್ರೀಮತಿ ಲೀಲಾವತಿ ಜಯಶೀಲ ಅವರು ವಿದ್ಯಾರ್ಥಿಗಳಿಗೆ ಪಾರಂಪರಿಕ ಜಾನಪದ ವಸ್ತುಗಳನ್ನು ಪರಿಚಯಿಸಿಕೊಟ್ಟರು. ತುಂಗಾ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಆರ್ ಕುಮಾರಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ತೀರ್ಥಹಳ್ಳಿ ತಾಲೂಕು ಜಾನಪದ ಪರಿಷತ್ತಿನ ಸದಸ್ಯರು ಹಾಗೂ ಜನಪದ ಕಲಾವಿದರು ಮತ್ತು ವಿದ್ಯಾರ್ಥಿಗಳು ವಿವಿಧ ಜನಪದ ಕಲೆಗಳನ್ನು ಪ್ರದರ್ಶಿಸಿದರು.

ಕಾಲೇಜಿನ ಐ.ಕ್ಯೂ.ಎ.ಸಿ. ಸಂಚಾಲಕ ಡಾ. ಎಂ. ನಾಗರಾಜ್ ಉಪಸ್ಥಿತರಿದ್ದರು. ತಾಲೂಕು ಜಾನಪದ ಪರಿಷತ್ತಿನ ಉಪಾಧ್ಯಕ್ಷರಾದ ಶ್ರೀ ವೆಂಕಟೇಶ್ ನಡಬೂರು ಎಲ್ಲರನ್ನು ವಂದಿಸಿದರು. ಕನ್ನಡ ಉಪನ್ಯಾಸಕ ಶ್ರೀ ಪ್ರಸನ್ನ ಕೆ ಎಲ್ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದ ಛಾಯಾಚಿತ್ರಗಳು:



ಗಣ್ಯರು ಕಾರ್ಯಕ್ರಮವನ್ನು ಉದ್ಘಾಟಿಸುತ್ತಿರುವುದು



ಪಾರಂಪರಿಕ ನಾಟಿ ವೈದ್ಯರನ್ನು ಸನ್ಮಾನಿಸುತ್ತಿರುವುದು

ಮುಖ್ಯಸ್ಥರು, ಕನ್ನಡ ವಿಭಾಗ

ಪ್ರಾಂಶುಪಾಲರು